ಇರುತ್ತದೆ. ಸದ್ಯ ಕಾರ್ಖಾನೆಯಲ್ಲಿರುವ ಸಕ್ಕರೆ ದಾಸ್ತಾನು ಪ್ರಚಲಿತ ಮಾರುಕಟ್ಟೆ ಬೆಲೆಗೆ ಬ್ಯಾಂಕಿನಿಂದ ಪಡೆದ ಸಾಲಕ್ಕೆ ಹೊಂದಾಣಿಕೆಯಾಗುತ್ತದೆ.

ಉ) 1,55,684 ಕ್ವಿಂಟಾಲ್

ಊ) ನೀಡಲಾಗಿದೆ.

79 ಶ್ರೀ ಕರಡಿ ಸಂಗಣ್ಣ ಅಮರಪ್ಪ ಮಾನ್ಯ ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ನಗರದಲ್ಲಿ ಉದ್ಯಾನವನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಉದ್ಯಾನವನಕ್ಕಾಗಿ ಯಾವ ಬಡಾವಣೆಯಲ್ಲಿ ಸ್ಥಳ ಗುರುತಿಸಲಾಗಿದೆ ಅದರ ರೂಪುರೇಷೆಗಳೇನು;

ಇ) ಉದ್ಯಾನವನವನ್ನು ನಿರ್ಮಿಸಲು ಎಂದಿನಿಂದ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು;

ಈ) ಹಾಗಿದ್ದಲ್ಲಿ ನಿರ್ಮಾಣಕ್ಕಾಗಿ ನೀಡುವ ಅನುದಾನದ ಮೊತ್ತ ಎಷ್ಟು?

ಶ್ರೀ (ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು)

ಅ) ಇಲ್ಲ

ಆ,ಇ,ಈ) ಉದ್ಭವಿಸುವುದಿಲ್ಲ.

1124 ಶ್ರೀ ಕರಡಿ ಸಂಗಣ್ಣ ಅಮರಪ್ಪ ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ನಗರದಲ್ಲಿ ಆಟೋಗಳಿಗೆ ಪೆಟ್ರೋಲಿಯಂ ಗ್ಯಾಸ್ ದೊರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ತೊಂದರೆಯನ್ನು ನೀಗಿಸಲು ತೆಗೆದುಕೊಂಡ ಕ್ರಮವೇನು;

ಇ) ಆಟೋ ಚಾಲಕರ ತೊಂದರೆಯನ್ನು ಹೋಗಲಾಡಿಸಲು ಪರ್ಯಾಯ ವ್ಯವಸ್ಥೆಯನ್ನು ಮಾಡಲಾಗುವುದೇ;